**ಕರ್ನಾಟಕ ಸರ್ಕಾರ**
**(ತಾಂತ್ರಿಕ ಶಿಕ್ಷಣ ಇಲಾಖೆ)**

ಸಂಖ್ಯೆ: ಸಿಟಿಇ 06 ಡಿವಿಪಿ (1) 2022

ಆಯುಕ್ತರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ: 24.05.2022

**ಅಧಿಕೃತ ಜ್ಞಾಪನ**

**ವಿಷಯ:** 2022-23 ನೇ ಸಾಲಿನಲ್ಲಿ ಒದಗಿಸಲಾದ ಆಯವ್ಯಯದ ಮೊದಲನೇ ಕಂತಿನ ಅನುದಾನವನ್ನು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ಬಿಡುಗಡೆ ಮಾಡುವ ಬಗ್ಗೆ

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 70 ಹೆಚ್‌ಪಿಟಿ 2022, ದಿನಾಂಕ 05.04.2022
2. ಸರ್ಕಾರದ ಆದೇಶ ಸಂಖ್ಯೆ: ಇಡಿ 70 ಹೆಚ್‌ಪಿಟಿ 2022, ದಿನಾಂಕ 13.04.2022

*********

ಮೇಲೆ ನಮೂದಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ 2022-23 ನೇ ಆರ್ಥಿಕ ಸಾಲಿಗೆ ಶಿಕ್ಷಣ ಇಲಾಖೆಯ ಉನ್ನತ ಶಿಕ್ಷಣ ವಲಯದಡಿ ಬರುವ ತಾಂತ್ರಿಕ ಶಿಕ್ಷಣಕ್ಕೆ (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದಂತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿ ಮುಂದುವರಿದ ಕಾರ್ಯಕ್ರಮಗಳನ್ನು ಮುಂದುವರಿಸಲು ಮತ್ತು ಅನುಷ್ಠಾನಗೊಳಿಸಲು ಅನುಮತಿ ನೀಡಿ ಸರ್ಕಾರ ಆದೇಶಿಸಿದೆ.

ಉಲ್ಲೇಖ(2) ರ ಸರ್ಕಾರದ ಆದೇಶದಲ್ಲಿ 2022-23 ನೇ ಆರ್ಥಿಕ ಸಾಲಿನ ಆಯವ್ಯಯದಲ್ಲಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಆದುದರಿಂದ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 6 ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ 2022-23 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2203-00-103-0-01 ರಡಿ ವಿವಿಧ ಉಪ ಶೀರ್ಷಿಕೆಗಳಲ್ಲಿ ಆಡಳಿತಾತ್ಮಕ ಉದ್ದೇಶಗಳಿಗೆ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಬಹುದಾಗಿದೆ.

ಆದುದರಿಂದ 2022-23 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2203-00-103-0-01 ರಡಿ

051-ಸಾಮಾನ್ಯ ವೆಚ್ಚದಡಿ ರೂ. 50,000/- ಗಳನ್ನು ಕಛೇರಿ ವೆಚ್ಚ ಪಾವತಿಸಲು ಬಿಡುಗಡೆ ಮಾಡಲಾಗಿದೆ.

052-ದೂರವಾಣಿ ವೆಚ್ಚದಡಿ ರೂ. 50,000/- ಗಳನ್ನು ದೂರವಾಣಿ ವೆಚ್ಚ ಭರಿಸಲು ಬಿಡುಗಡೆ ಮಾಡಲಾಗಿದೆ.

071-ಕಟ್ಟಡ ವೆಚ್ಚದಡಿ ರೂ. 50,000/- ಗಳನ್ನು ವಿದ್ಯುತ್ ವೆಚ್ಚ, ಕಟ್ಟಡ ಬಾಡಿಗೆ ಹಾಗೂ ನೀರಿನ ವೆಚ್ಚ ಭರಿಸಲು ಬಿಡುಗಡೆ ಮಾಡಲಾಗಿದೆ.

2022-23 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2203-00-103-0-01 ರಡಿ ಮೊದಲನೇ ಕಂತಿನ ಅನುದಾನ ಒಟ್ಟು ರೂ. 1,50,000/-(ರೂ ಒಂದು ಲಕ್ಷ ಐವತ್ತು ಸಾವಿರ ಮಾತ್ರ) ಗಳನ್ನು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಆಡಳಿತಾತ್ಮಕ ವೆಚ್ಚಗಳನ್ನು ಭರಿಸಲು ಬಿಡುಗಡೆ ಮಾಡಿ ಆದೇಶಿಸಲಾಗಿದೆ.

| ಕ್ರ ಸಂ | ಸಂಸ್ಥೆ | ಡಿಡಿಓ | ಪ್ರಸ್ತುತ ಬಿಡುಗಡೆ ಮಾಡಲಾದ ಅನುದಾನ (ರೂಗಳಲ್ಲಿ) ಲೆಕ್ಕ ಶೀರ್ಷಿಕೆ 2203-00-103-0-01 | | |
|---|---|---|---|---|---|
| | | | 051-ಸಾಮಾನ್ಯ ವೆಚ್ಚ | 052-ದೂರವಾಣಿ ವೆಚ್ಚ | 071-ಕಟ್ಟಡ ವೆಚ್ಚ |
| 1 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭದ್ರಾವತಿ | 332400 | 8,000 | 0 | 12000 |

| ಕ್ರ ಸಂ | ಸಂಸ್ಥೆ | ಡಿಡಿಓ | ಪ್ರಸ್ತುತ ಬಿಡುಗಡೆ ಮಾಡಲಾದ ಅನುದಾನ (ರೂಗಳಲ್ಲಿ) ಲೆಕ್ಕ ಶೀರ್ಷಿಕೆ 2203-00-103-0-01 | | |
|---|---|---|---|---|---|
| | | | 051-ಸಾಮಾನ್ಯ ವೆಚ್ಚ | 052-ದೂರವಾಣಿ ವೆಚ್ಚ | 071-ಕಟ್ಟಡ ವೆಚ್ಚ |
| 2 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಮಂಗಳೂರು | 332570 | 6000 | 7000 | 7000 |
| 3 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 332770 | 16000 | 15000 | 7000 |
| 4 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 332970 | 6,000 | 8000 | 7000 |
| 5 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಕಲಬುರ್ಗಿ | 333010 | 8,000 | 15000 | 7000 |
| 6 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 333050 | 6000 | 5000 | 10000 |
| ಒಟ್ಟು | | | **50,000** | **50,000** | **50,000** |

ಪ್ರಸ್ತುತ ಬಿಡುಗಡೆ ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸುವುದು.

(ಮಾನ್ಯ ಆಯುಕ್ತರಿಂದ ಕರಡು ಅನುಮೋದಿಸಲ್ಪಟ್ಟಿದೆ)

**ಜಂಟಿ ನಿರ್ದೇಶಕರು(ಆಡಳಿತ)**
**ತಾಂತ್ರಿಕ ಶಿಕ್ಷಣ ಇಲಾಖೆ.**

**ಇವರಿಗೆ:**

ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಪ್ರತಿ:**

1. ಜಂಟಿ ನಿರ್ದೇಶಕರು, ಆಡಳಿತ ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು- ಇವರ ಮಾಹಿತಿಗಾಗಿ
2. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು- ಇವರ ಮಾಹಿತಿಗಾಗಿ
3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ
4. ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ
5. ಲೆಕ್ಕಾಧಿಕಾರಿಗಳು (ಬಿಲ್ಸ್)
6. ನಗದು ವಿಭಾಗದ ಅಧೀಕ್ಷಕರು / ಕಾರ್ಯನಿರ್ವಾಹಕರು
7. ಆಕ್ವಿವೇಷನ್ ಕಡತಕ್ಕೆ.